## 92. ಬೆಂಗಳೂರಿನ ಸುತ್ತ ಜಿಲ್ಲೆಗಳಲ್ಲಿ ಕೈಗಾರಿಕಾ ಹಬ್

ರಾಜಧಾನಿ ಬೆಂಗಳೂರಿನ ಮೇಲಿರುವ ಕೈಗಾರಿಕಾ ಒತ್ತಡ ನಿವಾರಣೆಗೆ ಮುಂದಾಗಿರುವ ಸರ್ಕಾರ, ಬೆಂಗಳೂರಿಗೆ ಸಮೀಪದ ಜಿಲ್ಲೆಗಳಲ್ಲಿ ಕೈಗಾರಿಕಾ ಪ್ರದೇಶಗಳ ಅಭಿವೃದ್ಧಿಗೆ ಆದ್ಯತೆ ನೀಡಿದೆ.

ಬೆಂಗಳೂರು ನಗರದಲ್ಲಿಯೇ ಹೆಚ್ಚಿನ ಕೈಗಾರಿಕಾ ಪ್ರದೇಶಗಳು ನಿರ್ಮಾಣವಾಗಿರುವುದರಿಂದ ರಾಜ್ಯದ ವಿವಿಧ ಭಾಗಗಳಿಂದ ಜನರು ಕೆಲಸಕ್ಕಾಗಿ ವಲಸೆ ಬರುತ್ತಿದ್ದು, ನಗರದ ಮೇಲಿನ ಒತ್ತಡ ಹೆಚ್ಚಾಗಿ ಹಲವಾರು ಸಮಸ್ಯೆಗಳು ಸೃಷ್ಟಿಯಾಗುತ್ತಿವೆ. ಕೊರೋನಾ ಸಂದರ್ಭದಲ್ಲಿ ವಲಸೆ ಕಾರ್ಮಿಕರು ಊರುಗಳಿಗೆ ವಾಪಸ್ಸಾಗುವ ವೇಳೆ ಎದುರಾದ ಸಮಸ್ಯೆಗಳಿಂದ ಸರ್ಕಾರ ಎಚ್ಚೆತ್ತುಕೊಂಡಿದ್ದು, ರಾಜಧಾನಿಗೆ ಸಮೀಪದ ಜಿಲ್ಲೆಗಳಲ್ಲಿ ಕೈಗಾರಿಕಾ ಪ್ರದೇಶಗಳ ನಿರ್ಮಾಣಕ್ಕೆ ಇನ್ನಷ್ಟು ಒತ್ತು ನೀಡಲು ಮುಂದಾಗಿದೆ.

**ಲಕ್ಷಾಂತರ ಉದ್ಯೋಗ ಸೃಷ್ಟಿ ಸಾಧ್ಯತೆ:** ರಾಜ್ಯದ 2 ಹಾಗೂ 3ನೇ ದರ್ಜೆಯ ನಗರಗಳಲ್ಲಿ ಕೈಗಾರಿಕಾ ಪ್ರದೇಶಗಳನ್ನು ನಿರ್ಮಿಸಬೇಕೆಂಬ ಪ್ರಯತ್ನ ಇತ್ತೀಚಿನ ವರ್ಷಗಳಲ್ಲಿ ತೀವ್ರತೆ ಪಡೆದುಕೊಂಡಿದೆ. ಅದರಲ್ಲಿಯೂ ಪ್ರಮುಖವಾಗಿ ಬರಗಾಲದ ಜಿಲ್ಲೆಗಳಾದ ಚಿಕ್ಕಬಳ್ಳಾಪುರ, ರಾಮನಗರ, ಕೋಲಾರ, ಬೆಂಗಳೂರು ಗ್ರಾಮಾಂತರಗಳಲ್ಲಿ ಕೃಷಿಯನ್ನು ಹೊರತುಪಡಿಸಿದರೆ ಬೇರೆ ಆಯ್ಕೆಗಳಿಲ್ಲ. ಜೊತೆಗೆ ಈ ಜಿಲ್ಲೆಗಳಲ್ಲಿ ನೀರಿನ ಸಮಸ್ಯೆ ತೀವ್ರವಾಗಿದ್ದು, 1500 ಅಡಿ ಕೊರೆದರೂ ನೀರು ಸಿಗದ ಹಿನ್ನೆಲೆಯಲ್ಲಿ ಕೃಷಿಕರು ಸಂಕಷ್ಟದಲ್ಲಿದ್ದಾರೆ. ಈ ಹಿನ್ನೆಲೆಯಲ್ಲಿ ಕೃಷಿಕರು ಪರ್ಯಾಯವಾಗಿ ಜೀವನ ಕಟ್ಟಿಕೊಳ್ಳಲು ಜನರು ಬೆಂಗಳೂರಿಗೆ ಬರುತ್ತಿದ್ದಾರೆ. ಈ ನಾಲ್ಕು ಜಿಲ್ಲೆಗಳಲ್ಲಿ ಉದ್ದೇಶಿಸಿರುವ ಎಂಟು ಸಾವಿರ ಎಕರೆ ಜಮೀನಿನಲ್ಲಿ ಕೈಗಾರಿಕಾ ಪ್ರದೇಶಗಳು ಅಭಿವೃದ್ಧಿಯಾದರೆ ಬೆಂಗಳೂರು ಸುತ್ತಮುತ್ತಲಿನ ಭಾಗಗಳಲ್ಲಿ ಲಕ್ಷಾಂತರ ಉದ್ಯೋಗ ಸೃಷ್ಟಿಯಾಗುವ ನಿರೀಕ್ಷೆಯಿದೆ. ಜಿಲ್ಲಾ ಮಟ್ಟದಲ್ಲಿ ಕೈಗಾರಿಕಾ ಪ್ರದೇಶಗಳ ನಿರ್ಮಾಣದಿಂದ ಸ್ಥಳೀಯವಾಗಿ ಉದ್ಯೋಗ ದೊರೆತು ವಲಸೆ ತಪ್ಪಿಸಿದಂತಾಗುತ್ತದೆ.

**ಎಂಟು ಸಾವಿರ ಎಕರೆಯಲ್ಲಿ ಕೈಗಾರಿಕಾ ಹಬ್:** ಬೆಂಗಳೂರಿಗೆ ಹೊಂದಿಕೊಂಡಿರುವ ನಾಲ್ಕು ಜಿಲ್ಲೆಗಳ ಸುಮಾರು 8 ಸಾವಿರ ಎಕರೆ ಜಮೀನಿನಲ್ಲಿ ಕೈಗಾರಿಕಾ ಪ್ರದೇಶ ನಿರ್ಮಿಸಲು ಉದ್ದೇಶಿಸಲಾಗಿ, ಕೋಲಾರದ ಮಿಂಡಹಳ್ಳಿ ಹಾಗೂ ದೇವನಹಳ್ಳಿ ಭಾಗಗಳಲ್ಲಿ ಭೂಸ್ವಾಧೀನ ಪ್ರಕ್ರಿಯೆ ಆರಂಭವಾಗಿದ್ದು, ರಾಮನಗರದ ಬಿಡದಿ ಪ್ರದೇಶಗಳಲ್ಲಿ 700 ಎಕರೆ ಜಮೀನು ಸ್ವಾಧೀನ ಪ್ರಕ್ರಿಯೆ ಆರಂಭವಾದರೂ ದರ ನಿಗದಿ ಸಂಬಂಧಿಸಿ ಸ್ಥಳೀಯರ ವಿರೋಧದಿಂದ ತಾತ್ಕಾಲಿಕವಾಗಿ ಸ್ಥಗಿತಗೊಂಡಿದೆ. ಉಳಿದಂತೆ ಗೌರಿಬಿದನೂರು, ಶಿಡ್ಲಘಟ್ಟ, ಬಾಗೇಪಲ್ಲಿ, ಶ್ರೀನಿವಾಸಪುರ ಭಾಗಗಳಲ್ಲಿ ಕೈಗಾರಿಕಾ ಪ್ರದೇಶಗಳ ಅಭಿವೃದ್ಧಿಗೆ ಭೂಮಿ ಗುರುತಿಸುವ ಕೆಲಸ ಪ್ರಗತಿಯಲ್ಲಿದೆ.

**ನೂತನ ಕೈಗಾರಿಕಾ ನೀತಿ ಸಹಕಾರಿ:** ಬೆಂಗಳೂರಿನಿಂದ ಹೊರಗೆ ಕೈಗಾರಿಕೆಗಳನ್ನು ನಿರ್ಮಿಸುವ ಹೂಡಿಕೆದಾರರಿಗೆ ಸರ್ಕಾರ, ಸರ್ಕಾರದ ನೂತನ ಕೈಗಾರಿಕಾ ನೀತಿ 2020–25 ಅನುಕೂಲಕಾರಿಯಾಗಿದ್ದು, ಹಿಂದುಳಿದ ಜಿಲ್ಲೆಗಳಲ್ಲಿ ಕೈಗಾರಿಕೆಗಳನ್ನು ನಿರ್ಮಿಸುವವರಿಗೆ ಕೆಲ ವಿನಾಯಿತಿ ನೀಡಲು ಸರ್ಕಾರ ಮುಂದಾಗಿದೆ. ಇದರಿಂದಾಗಿ ಹೆಚ್ಚಿನ ಸಂಖ್ಯೆಯ ಉದ್ಯಮಿಗಳು ರಾಜ್ಯದಲ್ಲಿ ಹೂಡಿಕೆ ಮಾಡಲು ಮುಂದಾಗಿರುವುದು ಕಂಡು ಬಂದಿದೆ. ಇದರೊಂದಿಗೆ ಕೈಗಾರಿಕೆಗಳನ್ನು ನಿರ್ಮಿಸಲು ಈ ಹಿಂದೆಯಿದ್ದ ನಿಯಮಗಳನ್ನು ಸಹ ಸರಳೀಕರಣಗೊಳಿಸಿರುವುದು ಸಹ ಕೈಗಾರಿಕೆಗಳಿಗೆ ವರದಾನವಾಗಿದೆ.

ಆಧಾರ: ವಿಜಯ ಕರ್ನಾಟಕ, ದಿನಾಂಕ:05.09.2020